ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಕೊಡಗು ಜಿಲ್ಲೆಯಲ್ಲಿ ಉಂಟಾಗುವ ಪ್ರವಾಹಕ್ಕೆ ಶಾಶ್ವತ ಪರಿಹಾರ ನೀಡುವ ಬಗ್ಗೆ

ಶ್ರೀ ಸುನೀಲ್ ಸುಬ್ರಮಣಿ ಎಂ. ಪಿ.(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

52 (231) ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕೊಡಗು ಜಿಲ್ಲೆಯಲ್ಲಿ ಪ್ರತಿವರ್ಷ ಮಳೆಗಾಲದಲ್ಲಿ ಕಾವೇರಿ ನದಿಯು ಉಕ್ಕಿ ಹರಿಯುವುದರಿಂದ ನದಿಯ ತೀರ ಪ್ರದೇಶಗಳಾದ ಕುಶಾಲನಗರದ ಕೆಲವು ಬಡಾವಣೆಗಳು ಮತ್ತು ಮಡಿಕೇರಿ ತಾಲ್ಲೂಕಿನ ಹೋದ್ದೂರು, ಚೆರಿಯಪರಂಬು ಮತ್ತು ಭಾಗಮಂಡಲ ಸೇರಿದಂತೆ ಜಿಲ್ಲೆಯ ವಿವಿಧ ಕಡೆಗಳಲ್ಲಿ ಪ್ರವಾಹವು ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈ ಮಳೆಗಾಲದ ಪ್ರವಾಹವನ್ನು ಶಾಶ್ವತವಾಗಿ ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಇದರ ಬಗ್ಗೆ ಯಾವುದಾದರೂ ಚರ್ಚೆಗಳು ಅಥವಾ ಕ್ರಮಗಳು ಸರ್ಕಾರದ ಮಟ್ಟದಲ್ಲಿ ನಡೆಯುತ್ತಿದೆಯೇ? (ವಿವರ ನೀಡುವುದು)